ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಖಾದಿ ಸಂಘ ಸಂಸ್ಥೆಗಳಿಗೆ ವಾರ್ಷಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

493(399) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಖಾದಿ ಸಂಘ ಸಂಸ್ಥೆಗಳಿಗೆ ವಾರ್ಷಿಕವಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಈ ಸಂಘ ಸಂಸ್ಥೆಗಳಿಗೆ ವಾರ್ಷಿಕವಾಗಿ ಎಷ್ಟು ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದೆ ;

(ಇ) 2018-2019 ಹಾಗೂ 2019-20ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಖಾದಿ ಸಂಘ ಸಂಸ್ಥೆಗಳಿಗೆ ವಾರ್ಷಿಕವಾಗಿ ಎಷ್ಟು ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ ;

(ಈ) ಅನುದಾನ ಬಿಡುಗಡೆಗೊಳಿಸಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು;

(ಉ) ಬಾಕಿ ಅನುದಾನವನ್ನು ಬಿಡುಗಡೆಗೊಳಿಸುವುದು ಯಾವಾಗ ?